## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ತಳವಾರ್ ಸಾಬಣ್ಣ ಇವರ ನಿಯಮ-330 ರ ಸೂಚನೆಗೆ ಉತ್ತರ

**ವಿಷಯ:** ಭೀಮಾ ನದಿ 786 ಕಿ.ಮೀ.ಗಳ ಒಟ್ಟು ಹರಿವಿನಲ್ಲಿ ಕರ್ನಾಟಕದಲ್ಲಿ 206 ಕಿ.ಮೀ. ಹರಿಯುವ ಭೀಮಾ ನದಿ ನೀರನ್ನು ನಂಬಿಕೊಂಡು 164 ಹಳ್ಳಿಗಳ ಜನರು ಬದುಕುತ್ತಿದ್ದಾರೆ. 1976ರಲ್ಲಿ ನ್ಯಾ.ಬಚಾವತ್ ಆಯೋಗದ ತೀರ್ಪಿನಂತೆ ಮಹಾರಾಷ್ಟ್ರಕ್ಕೆ 95 ಟಿಎಂಸಿ ಮತ್ತು ಕರ್ನಾಟಕ್ಕೆ 15 ಟಿಎಂಸಿ ನೀರು ಬಳಕೆ ಮಾಡಿಕೊಳ್ಳಬೇಕಿತ್ತು. ಮಹಾರಾಷ್ಟ್ರ ರಾಜ್ಯ ಭೀಮಾ ನದಿಯ ನೀರನ್ನು ಅಕ್ರಮವಾಗಿ ಸುರಂಗ ಮಾರ್ಗದ ಮೂಲಕ ಸೀನಾ ನದಿಗೆ ಸೇರಿಸಿಕೊಳ್ಳುವುದರ ಜೊತೆಗೆ ಅನಧಿಕೃತ ಬ್ಯಾರೇಜ್‌ಳನ್ನು ನಿರ್ಮಿಸಿ 95 ಟಿಎಂಸಿ ಗಿಂತಲೂ ಹೆಚ್ಚಿನ ನೀರನ್ನು ಬಳಸಿಕೊಳ್ಳುತ್ತಿದ್ದಾರೆ. ಇದು ನ್ಯಾ. ಬಚಾವತ್ ಆಯೋಗದ ತೀರ್ಪಿನ ಉಲ್ಲಂಘನೆಯಾಗಿದೆ. ಉಜನಿ ಅಣೆಕಟ್ಟುಯಿಂದ ಡೆಡ್ ಸ್ಟೋರೇಜ್ ನೀರನ್ನು ಬಳಕೆ ಮಾಡುತ್ತಾರೆ. ಆದರೆ ಕರ್ನಾಟಕಕ್ಕೆ ಬಿಡುತ್ತಿಲ್ಲ. ಬೇಸಿಗೆ ಕಾಲದಲ್ಲಿ ನದಿ ನೀರಿನ ಕೊರತೆಯಿಂದ ರೈತರು ಬೆಳೆದ ಲಕ್ಷಾಂತರ ಎಕರೆ ಕಬ್ಬು ಮತ್ತು ಇತರೆ ಬೆಳೆಗಳು ಒಣಗಿ ಹೋಗಿ ರೈತರು ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದ್ದಾರೆ. ಕಳೆದ ವರ್ಷದ ಬೇಸಿಗೆಯಲ್ಲಿ ಭೀಮಾನದಿ ನೀರು ಸಂಪೂರ್ಣ ಬತ್ತಿಹೋಗಿದ್ದರಿಂದ, ಕಲಬುರಗಿ, ವಿಜಯಪುರ, ಯಾದಗಿರಿ ಜಿಲ್ಲೆಯ ಜನರ ಕುಡಿಯುವ ನೀರು, ರೈತರ ಬೆಳೆಗಳಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗಿತ್ತು. ಪ್ರತಿ ವರ್ಷ ಭೀಮಾ ತೀರದ ಜನರು ಒಟ್ಟಾಗಿ ಅಮರಣಾಂತರ ಉಪವಾಸ ಸತ್ಯಾಗ್ರಹ ಮಾಡಿ ಕುಡಿಯಲು ಬೇಕಾಗುವ ನೀರನ್ನು ಬಿಡಿಸಿಕೊಳ್ಳುತ್ತಿದ್ದಾರೆ. ಕನಿಷ್ಠ ಕುಡಿಯುವ ನೀರಿಗೂ ಸಂಕಷ್ಟಕ್ಕೆ ಸಿಲುಕುತ್ತಿರುವ ಕಲಬುರಗಿ, ವಿಜಯಪುರ, ಯಾದಗಿರಿ ಜಿಲ್ಲೆಯ ಜನರಿಗೆ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆಯಾಗಲು ಹಾಗೂ ಮಹಾರಾಷ್ಟ್ರದ ಅಕ್ರಮ ನೀರಾವರಿ ಯೋಜನೆಗಳ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವ ಕುರಿತು.

*****

ಕೃಷ್ಣಾ ಜಲವಿವಾದ ನ್ಯಾಯಾಧಿಕರಣ- I (ಬಚಾವತ್ ನ್ಯಾಯಾಧಿಕರಣ) 1976 ರಲ್ಲಿ ನೀಡಿರುವ ಅಂತಿಮ ತೀರ್ಪಿನ Clause-IX(A)(ii)(b) ಪ್ರಕಾರ ಮಹಾರಾಷ್ಟ್ರ ರಾಜ್ಯವು ಭೀಮಾ ಮುಖ್ಯ ನದಿಯಿಂದ 95.00 ಟಿಎಂಸಿ ಗಿಂತ ಹೆಚ್ಚಾಗಿ ನೀರನ್ನು ಬಳಸಬಾರದೆಂದು ಹಾಗೂ Clause-IX(B)(iii) ಪ್ರಕಾರ ಕರ್ನಾಟಕ ರಾಜ್ಯವು ಭೀಮಾ ಮುಖ್ಯ ನದಿಯಿಂದ 15.00 ಟಿಎಂಸಿ ಗಿಂತ ಹೆಚ್ಚಾಗಿ ಬಳಸಬಾರದೆಂದು ನಿರ್ಬಂಧವಿದೆ. ಸದರಿ ಅಂತಿಮ ತೀರ್ಪಿನಲ್ಲಿ ಕಣಿವೆ ರಾಜ್ಯಗಳಿಗೆ ಮಾಡಿರುವ ಒಟ್ಟಾರೆ ಹಂಚಿಕೆಯಲ್ಲಿ ಯಾವುದೇ ರಾಜ್ಯವು ಇನ್ನೊಂದು ರಾಜ್ಯಕ್ಕೆ ನೀರನ್ನು ಬಿಡುಗಡೆ ಮಾಡುವ ಕುರಿತು ಆದೇಶವಿರುವುದಿಲ್ಲ.

ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-I ವಿಧಿಸಿರುವ ನಿರ್ಬಂಧಕ್ಕೆ ಒಳಪಟ್ಟು ಕಣಿವೆ ರಾಜ್ಯಗಳು ಯೋಜನೆಗಳನ್ನು ಕೈಗೊಂಡಿರುತ್ತವೆ.

ಸೀನಾ ನದಿಯು ಮಹಾರಾಷ್ಟ್ರದ ಭೀಮಾ ನದಿಯ ಒಂದು ಉಪನದಿಯಾಗಿದೆ. ಕೃಷ್ಣಾ ಜಲವಿವಾದ ನ್ಯಾಯಾಧೀಕರಣ-II ರ ಮುಂದೆ ಮಹಾರಾಷ್ಟ್ರ ರಾಜ್ಯವು ಸಲ್ಲಿಸಿರುವ ಮಾಹಿತಿಯ ಪ್ರಕಾರ ಮಹಾರಾಷ್ಟ್ರ ರಾಜ್ಯವು ಉಜ್ಜನಿ ಜಲಾಶಯದಿಂದ ನೀರನ್ನು ಸೀನಾ ನದಿಗೆ ತಿರುವುಗೊಳಿಸುತ್ತಿದೆ ಹಾಗೂ ಸದರಿ ಯೋಜನೆಯನ್ನು ಮಹಾರಾಷ್ಟ್ರ ರಾಜ್ಯಕ್ಕೆ ಮುಖ್ಯ ಭೀಮಾ ನದಿಯಲ್ಲಿ ನೀರನ್ನು ಬಳಸಲು ವಿಧಿಸಿರುವ ನಿರ್ಬಂಧದಡಿಯಲ್ಲಿ ಕೈಗೊಂಡಿರುವುದಾಗಿ ತಿಳಿದು ಬಂದಿದೆ.

ರಾಜ್ಯದ ಜಲ ಸಂಪನ್ಮೂಲ ಇಲಾಖೆಯಡಿಯಲ್ಲಿನ ಕೃಷ್ಣಾ ಭಾಗ್ಯ ಜಲ ನಿಗಮ ಮತ್ತು ಕರ್ನಾಟಕ ನೀರಾವರಿ ನಿಗಮದಡಿ ಭೀಮಾ ನದಿ ಪಾತ್ರದಡಿ 15 ಟಿ.ಎಂ.ಸಿ ನೀರಿನ ಬಳಕೆಗಾಗಿ ಒಟ್ಟು 6 ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದ್ದು, ವಿವರಗಳು ಈ ಕೆಳಗಿನಂತಿವೆ:

| ಕ್ರ. ಸಂ | ಬ್ಯಾರೇಜ್ | ಜಿಲ್ಲೆ | ಹಂಚಿಕೆಯಾದ ನೀರಿನ ಪ್ರಮಾಣ (TMC) | ಅಚ್ಚುಕಟ್ಟು ಕ್ಷೇತ್ರ (ಹೆಕ್ಟೇರ್) | ಷರಾ |
|---|---|---|---|---|---|
| 1. | ಘತ್ತರಗಾ | ಕಲಬುರಗಿ | 1.25 | 1,890 | ಬ್ಯಾರೇಜ್ ಕಾಮಗಾರಿಗಳು ಪೂರ್ಣಗೊಂಡಿದ್ದು, ಬ್ಯಾರೇಜಿನಡಿ ಶೇಖರಣೆಗೊಂಡ ನೀರನ್ನು ರೈತರು ತಮ್ಮ ಸ್ವಂತ ಪಂಪ್‌ಸೆಟ್ ಬಳಸಿ ನೀರಾವರಿಗಾಗಿ ಬಳಸುತ್ತಿದ್ದಾರೆ. |
| 2. | ಕಲ್ಲೂರು-ಬಿ | ಕಲಬುರಗಿ | 1.45 | 2,500 | |
| 3. | ಯಾದಗಿರಿ | ಯಾದಗಿರಿ | 1.01 | 1,935 | |
| 4. | ಜೋಳದಡಗಿ-ಗೂಡೂರ್ | ಯಾದಗಿರಿ | 1.29 | 1,856 | |
| 5. | ಸನ್ನತಿ | ಯಾದಗಿರಿ | 4.00 | 16,000 | ಸದರಿ ಬ್ಯಾರೇಜ್ ನಡಿ ಸಂಗ್ರಹಗೊಂಡ ನೀರನ್ನು ಲಿಫ್ಟ್ ಮುಖಾಂತರ ಸನ್ನತಿ ಏತ ನೀರಾವರಿ ಯೋಜನೆಯಡಿ ಸೃಜಿಸಲಾದ ಅಚ್ಚುಕಟ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ. |
| 6. | ಸೊನ್ನ | ಕಲಬುರಗಿ | 6.00 | 24,292 | ಯೋಜನಾ ಕಾಮಗಾರಿ ಪೂರ್ಣಗೊಂಡಿದ್ದು, ಬಳೂಂಡಗಿ ಮತ್ತು ಅಳ್ಳಗಿ ಲಿಫ್ಟ್‌ಗಳ ಮೂಲಕ ನೀರಾವರಿಗಾಗಿ ನೀರು ಹರಿಸಲಾಗಿದೆ. |
| | | **ಒಟ್ಟು** | **15.00** | **48,473** | |

ಕರ್ನಾಟಕ ರಾಜ್ಯವು ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-II ರ ಮುಂದೆ ಭೀಮಾ ನದಿ ಉಪ ಕೊಳ್ಳದಲ್ಲಿನ ಬಳಕೆಗಾಗಿ 12 ಟಿ.ಎಂ.ಸಿ. ಹೆಚ್ಚುವರಿ ನೀರಿನ ಬೇಡಿಕೆಯನ್ನು ಮಂಡಿಸಿತ್ತು. ಆದರೆ ನ್ಯಾಯಾಧಿಕರಣವು ರಾಜ್ಯದ ಬೇಡಿಕೆಯನ್ನು ಪರಿಗಣಿಸಿರುವುದಿಲ್ಲ. ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-IIರ ಆದೇಶದನ್ವಯ ಮಹಾರಾಷ್ಟ್ರ ರಾಜ್ಯವು 3.00 ಟಿ.ಎಂ.ಸಿ. ನೀರನ್ನು ನದಿಯಲ್ಲಿನ ಕನಿಷ್ಠ ಹರಿವಿಗಾಗಿ ಬಿಡುಗಡೆ ಮಾಡಬೇಕಾಗಿದ್ದು, ಇದರಲ್ಲಿ ವಾರ್ಷಿಕ (ಡಿಸೆಂಬರ್ ನಿಂದ ಮೇ ಅಂತ್ಯದವರೆಗೆ) ಭೀಮಾ ನದಿಯಲ್ಲಿ 1.00 ಟಿ.ಎಂ.ಸಿ. ನೀರನ್ನು ಮಹಾರಾಷ್ಟ್ರ-ಕರ್ನಾಟಕ ಗಡಿ ಪ್ರದೇಶದ ತಾಕಳಿ ಮಾಪನ ಕೇಂದ್ರದಲ್ಲಿ ನದಿಯಲ್ಲಿನ ಕನಿಷ್ಠ ಹರಿವಿಗಾಗಿ ಹರಿಸಬೇಕೆಂದು ಸೂಚಿಸಲಾಗಿದೆ. ಈ ಪ್ರಮಾಣದ ನೀರನ್ನು ಇತರೆ ಉದ್ದೇಶಗಳಿಗೆ ಬಳಸಲು ರಾಜ್ಯಕ್ಕೆ ಅವಕಾಶವಿರುವುದಿಲ್ಲ. ಸದರಿ ಕೃಷ್ಣಾ ಜಲವಿವಾದ ನ್ಯಾಯಾಧಿಕರಣ—II ರ ಆದೇಶವು ಗೆಜೆಟ್ ಪ್ರಕಟಣೆ ಆಗಬೇಕಾಗಿದೆ.

ಮಹಾರಾಷ್ಟ್ರ ರಾಜ್ಯವು ಕರ್ನಾಟಕ ರಾಜ್ಯಕ್ಕೆ ನಿಯಂತ್ರಿತ ಬಿಡುಗಡೆ (Regulated releases) ಮಾಡಲು ನ್ಯಾಯಮೂರ್ತಿ ಬಚಾವತ್ ರವರ ಆಯೋಗದ ವರದಿಯಲ್ಲಿ ಆದೇಶವಿರುವುದಿಲ್ಲ ಹಾಗೂ ಕಣಿವೆ ರಾಜ್ಯಗಳು ಕುಡಿಯುವ ನೀರಿಗೆ ಹಾಗೂ ಕೈಗಾರಿಕೆಗಳಿಗೆ ಅಗತ್ಯವಿರುವ ನೀರನ್ನು ಹಂಚಿಕೆಯಾಗಿರುವ ಪ್ರಮಾಣದಲ್ಲೇ ಭರಿಸಬೇಕಾಗಿದೆ.

ಸಾಮಾನ್ಯ ವರ್ಷ (Normal Year) ಗಳಲ್ಲಿ ಭೀಮಾ ನದಿ ಪಾತ್ರದಡಿ ನೀರಿನ ಕೊರತೆ ಕಂಡುಬಂದಿರುವುದಿಲ್ಲ. ಕೊರತೆಯಾದ ಜಲ ವರ್ಷಗಳಲ್ಲಿ ಕುಡಿಯುವ ಹಾಗೂ ಇತರೆ ಅಗತ್ಯಗಳಿಗೆ ನೀರನ್ನು ಮಹಾರಾಷ್ಟ್ರ ರಾಜ್ಯದಿಂದ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಜಸಂಇ 15 ಕೃವಿಇ 2025

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿಗಳು